ಉಪಾಧ್ಯಕ್ಷರು : ಈಗ ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

ಶ್ರೀ ಜೆ.ಸಿ. ಮಾಧುಸ್ವಾಮಿ : ಪರ್ಯಾಲೋಚನೆ ಬೇಡವೆಂದು ಮಾನ್ಯ ಸಚಿವರೇ ಹೇಳುತ್ತಿದ್ದಾರೆ.

ಶ್ರೀ ವಾಟಾಳ್ ನಾಗರಾಜ್ : ಆಗುವುದಿಲ್ಲ, ಇದು ಬಹಳ ಪ್ರಾಮುಖ್ಯವಾದುದು, ಇದು ಬಹಳ ಚರ್ಚೆಯಾಗಬೇಕು.

ಶ್ರೀ ವಿ. ಸೋಮಣ್ಣ : ಅದರ ಡಿಟೈಲ್ ಕೊಡಬೇಕು, ಮತ್ತು ಅದರ ಬಗ್ಗೆ ಚರ್ಚೆಯಾಗಬೇಕು. ಇದನ್ನು ನೀವು ತರಾತುರಿಯಾಗಿ ತೆಗೆದುಕೊಳ್ಳುವುದಕ್ಕೆ ಹೋಗಬೇಡಿ. ಇದು ಚರ್ಚೆಯಾಗಬೇಕು.

(ಅಡಚಣೆ)

ಉಪಾಧ್ಯಕ್ಷರು : ಇದು ಅಪ್ರೋಪ್ರಿಯೇಷನ್ ಬಿಲ್...

ಶ್ರೀ ವಿ. ಸೋಮಣ್ಣ : ಮಾನ್ಯ ಉಪಾಧ್ಯಕ್ಷರೆ, ದಯಮಾಡಿ ಅದು ಚರ್ಚೆಯಾಗಬೇಕು. ತರಾತುರಿಯಾಗಿ ಮಂಡನೆ ಚರ್ಚೆ ಮಾಡುವುದು ಬೇಡ, ಅದರ ಬಗ್ಗೆ ಸವಿಸ್ತಾರವಾಗಿ ಚರ್ಚೆಯಾಗಬೇಕು ಪೌರ ನಿಗಮದ ವಿಧೇಯಕ ಏನಾಯಿತು?

ಶ್ರೀ ಎಂ.ಪಿ. ಪ್ರಕಾಶ್ : ಇದು ಪರ್ಯಾಲೋಚನೆಗೆ ಇದೆ.

ಉಪಾಧ್ಯಕ್ಷರು : ಪೌರ ನಿಗಮದ ವಿಧೇಯಕ ನಾಳೆ ಇದೆ.

(ಇ) ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕ, 2006

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : ಮಾನ್ಯ ಉಪಾಧ್ಯಕ್ಷರೆ, "2006ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ, "2006ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು "ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 3

ಉಪಾಧ್ಯಕ್ಷರು : ಪ್ರಶ್ನೆ ಏನೆಂದರೆ ಖಂಡ 3 ಈ ವಿಧೇಯಕದ ಅಂಗವಾಗಿರುತ್ತದೆ". .....

ಪ್ರಸ್ತಾವ ಅಂಗೀಕರಿಸಲ್ಪಟ್ಟಿತ್ತು ಹಾಗೂ ಖಂಡ 3 ಅನ್ನು ಈ ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಖಂಡ 1 ಇತ್ಯಾದಿ

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳು ಈ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಮೊದಲನೆಯ ಖಂಡ, ದೀರ್ಘಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು).

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) : "2006ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೊರುತ್ತೇನೆ."

ಉಪಾಧ್ಯಕ್ಷರು: ಪ್ರಸ್ತಾವ ಏನೆಂದರೆ, "2006ನೇ ಸಾಲಿನ ಕರ್ನಾಟಕ ಧನವಿನಿಯೋಗ (ಸಂಖ್ಯೆ 4) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು.

ಪ್ರಕಟಣೆ

ಉಪಾಧ್ಯಕ್ಷರು: ಈಗ ಮಾನ್ಯ ಗೌವರ್ನರ್‌ನಿಂದ ಒಂದು ಮೆಸೇಜ್ ಬಂದಿದೆ. ಅದನ್ನು ಓದುತ್ತೇನೆ.

8. ಪ್ರಕಟಣೆ

Message of Governor Dt. July 22, 2006

Under Article 200 of the Consitution if India regarding Karnataka Legislature (Prevention of Disqualification (Amendment) Bill, 2006 - I, T.N. Chaturvedi, Governor of Karnataka have considered the Karnataka Legislature (Prevention of Disqualification (Amendment) Bill, 2006 passed by both the Houses of Legislature in accordance with the provisions of Article 200 of the Constitution of India.

Article 191(1) (a)of the Constitution reads as follows :-

"A person shall be disqualified for being chosen as, and for being a Member of the Legislative Assembly or Legislative Council of a State -